ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೬

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತಮೂರನೇ ಅಧಿವೇಶನ
(ಮುಂದುವರೆದ ಉಪವೇಶನಗಳು)
ಬುಧವಾರ, ದಿನಾಂಕ: ೦೭ನೇ ಜೂನ್, ೨೦೧೭

---

**ಸಮೂಹ – III**

೧. ಅರಣ್ಯ ಸಚಿವರು.
೨. ಕಂದಾಯ ಸಚಿವರು.
೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು.
೪. ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು.
೫. ಕಾರ್ಮಿಕ ಸಚಿವರು.
೬. ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು.
೭. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು.

---

## ಮೋಜಣಿ ಕಾರ್ಯದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೨೨೬ (೨೨೫೧) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ರೈತರು ತಮ್ಮ ಜಮೀನುಗಳನ್ನು ಮೋಜಣಿ ಮಾಡಲು ಅರ್ಜಿ ಸಲ್ಲಿಸಿ ೩–೪ ವರ್ಷಗಳವರೆಗೆ ಕಾಯುವ ಪರಿಸ್ಥಿತಿ ಇದ್ದು, ಇದರಿಂದ ರೈತರು ತೀವ್ರ ತೊಂದರೆ ಅನುಭವಿಸುತ್ತಿರುವುದು ಗೊತ್ತಿದ್ದೂ, ಸರ್ಕಾರ ಈ ತೊಂದರೆ ಬಗೆಹರಿಸುವಲ್ಲಿ ಯಾವುದೇ ರೀತಿಯ ಕ್ರಮ ತೆಗೆದುಕೊಳ್ಳುತ್ತಿಲ್ಲ ಎಂಬ ಗಂಭೀರ ಆರೋಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಈ ಸಮಸ್ಯೆಯನ್ನು ಬಗೆಹರಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡಿದ್ದ ಕ್ರಮಗಳೇನು ; (ವಿವರ ನೀಡುವುದು)

(ಇ) ಮೋಜಣಿ ಮಾಡಲು ಇಷ್ಟೊಂದು ವಿಳಂಬ ಮಾರ್ಗಕ್ಕೆ ಕಾರಣವೇನು : (ವಿವರ ನೀಡುವುದು)

(ಈ) ರಾಜ್ಯದಲ್ಲಿ ಭೂ ದಾಖಲೆಗಳ ಇಲಾಖೆಯಲ್ಲಿ ಪ್ರಸ್ತುತ ಮೋಜಣಿ ಕಾರ್ಯಕ್ಕೆ ನಿಯೋಜನೆಗೊಂಡ ಸಿಬ್ಬಂದಿಗಳೆಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಹುದ್ದೆಗಳನ್ನು ನೇಮಕ ಮಾಡುವಲ್ಲಿ ಸರ್ಕಾರ ಇಷ್ಟೊಂದು ವಿಳಂಬ ನೀತಿ ಅನುಸರಿಸಲು ಕಾರಣವೇನು ; ಯಾವ ಕಾಲಮಿತಿಯೊಳಗೆ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ? (ವಿವರ ನೀಡುವುದು)

## ರಾಜ್ಯದ ನೇಕಾರರಿಗೆ ಕೇಂದ್ರ ಸರ್ಕಾರದ ಯೋಜನೆ ಬಗ್ಗೆ

ಶ್ರೀ ಎಂ.ಡಿ. **ಲಕ್ಷ್ಮೀನಾರಾಯಣ (ಅಣ್ಣಯ್ಯ)** (**ನಾಮನಿರ್ದೇಶನ ಹೊಂದಿದವರು**) –

೨೨೭ (೨೨೭೭) ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ನೇಕಾರರು ಅಸಂಘಟಿತರು, ಕೂಲಿಕಾರ್ಮಿಕ ನೇಕಾರರಿಗೆ ಎಷ್ಟು ವರ್ಷಗಳಿಂದ ಕೇಂದ್ರ ಸರ್ಕಾರವು ಅನುದಾನ ನೀಡಿರುತ್ತದೆ ;

(ಆ) ಕಳೆದ ಮೂರು ವರ್ಷಗಳಲ್ಲಿ ವಿವಿಧ ಯೋಜನೆಗಳಿಗೆ ನೀಡಿರುವ ಸವಲತ್ತುಗಳ ಬಗ್ಗೆ ಕೇಂದ್ರ ಸರ್ಕಾರದ ಪಾಲೆಷ್ಟು : ಯೋಜನೆಗಳು ಯಾವುವು ; ಎಲ್ಲೆಲ್ಲಿ ನೀಡಲಾಗಿದೆ :

(ಇ) ಕೇಂದ್ರ ಸರ್ಕಾರದ ಅನುದಾನದ ಜೊತೆ ರಾಜ್ಯ ಸರ್ಕಾರದ ಕೊಡುಗೆ ಏನು :

(ಈ) ಇತ್ತೀಚಿನ ವರ್ಷಗಳಲ್ಲಿ ಕೇಂದ್ರ ಸರ್ಕಾರದ ಅನುದಾನ ಕಡಿಮೆಯಾಗಲು ಕಾರಣವೇನು ;

(ಉ) ಹೊಸ ಯೋಜನೆಗಳಿಗೆ ಪ್ರಸ್ತಾವನೆ ಕಳುಹಿಸಲಾಗಿದೆಯೇ ? (ಕಳುಹಿಸಲಾಗಿದ್ದಲ್ಲಿ ಸದರಿ ಯೋಜನೆಗಳ ವಿವರ ನೀಡುವುದು)

## ಜಿಲ್ಲಾ ಸಂಕೀರ್ಣ ನಿರ್ಮಾಣ ಮಾಡುವ ಬಗ್ಗೆ

ಶ್ರೀ **ಎನ್.ಎಸ್. ಬೋಸ್‌ರಾಜು** (**ವಿಧಾನಸಭೆಯಿಂದ ಚುನಾಯಿತರಾದವರು**) –

೨೨೮ (೨೨೯೯) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ಜಿಲ್ಲಾ ಕೇಂದ್ರದಲ್ಲಿ ಜಿಲ್ಲಾ ಸಂಕೀರ್ಣ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮ ಏನು ;

(ಆ) ಮಾನ್ವಿ ಪಟ್ಟಣದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ನೂತನವಾಗಿ ಘೋಷಣೆ ಮಾಡಿರುವ ೪೯ ತಾಲ್ಲೂಕುಗಳಲ್ಲಿ ಆಡಳಿತ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮ ಏನು ;

(ಈ) ಜಾತಿ ಪ್ರಮಾಣ ಪತ್ರ ನೀಡುವಲ್ಲಿ ವಿಳಂಬವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹೆಳವ ಸಮಾಜದ ಜಾತಿ ಪ್ರಮಾಣ ಪತ್ರ ನೀಡುವಲ್ಲಿ ಸರ್ಕಾರ ತೆಗೆದುಕೊಂಡ ಕ್ರಮ ಏನು ?

## ಉತ್ತರ ಕನ್ನಡ ಜಿಲ್ಲೆಯ ಶಿರಸಿ ತಾಲ್ಲೂಕಿನಲ್ಲಿ ಗಂಧದ ಗಿಡಗಳ ಹಾಗೂ ದಾಲಚಿನ್ನಿ ಎಲೆ ತೊಗಟೆಗಳ ಕಳ್ಳತನ ಕುರಿತು

**ಶ್ರೀ ಎಸ್.ಎಲ್. ಘೋಟ್ನೇಕರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** –

೨೨೯ (೨೧೮೫) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉತ್ತರ ಕನ್ನಡ ಜಿಲ್ಲೆಯ ಶಿರಸಿ, ತಾಲ್ಲೂಕಿನಲ್ಲಿ ಗಂಧದ ಗಿಡಗಳ ಹಾಗೂ ದಾಲಚಿನ್ನಿ ಎಲೆ, ತೊಗಟೆಗಳ ವ್ಯಾಪಕ ಕಳ್ಳತನ ನಡೆಯುತ್ತಿದ್ದರೂ ಅರಣ್ಯ ಇಲಾಖೆ ಮೌನ ವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಶಿರಸಿ ಅರಣ್ಯ ವಲಯಕ್ಕೆ ಸಂಬಂಧಿಸಿದ ತಾಲ್ಲೂಕಿನ ಹೊನ್ನೆಗದ್ದೆ, ನಿರನ್ನಳ್ಳಿ, ಶಿಗೇಹಳ್ಳಿ ಇಟಗುಳಿ ಭಾಗಗಳಲ್ಲಿ ಗಂಧದ ಗಿಡಗಳು ಹೆಚ್ಚಿನ ಸಂಖ್ಯೆಯಲ್ಲಿದ್ದು, ಆದರೆ ಇಲ್ಲಿ ಹೆಚ್ಚಾಗಿ ಗಂಧದ ಕಟ್ಟಿಗೆ ಕಳ್ಳತನವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವುದೇ ಕ್ರಮ ಕೈಗೊಳ್ಳದೇ ಇರುವುದಕ್ಕೆ ಕಾರಣವೇನು ?

## ಕೆರೆಗಳಿಗೆ ನೀರುಣಿಸುವ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೩೦ (೨೧೫೨) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯ ಕೆರೆಗಳಿಗೆ ನೀರುಣಿಸಲು ಕೈಗೆತ್ತಿಕೊಂಡಿರುವ ಯೋಜನೆಗಳು ಯಾವುವು ; ಪ್ರಸ್ತುತ, ಸದರಿ ಯೋಜನೆಗಳು ಯಾವ ಹಂತದಲ್ಲಿವೆ ಮತ್ತು ಇವುಗಳನ್ನು ಎಂದಿನಿಂದ ಪ್ರಾರಂಭಿಸಲಾಗಿದೆ ;

(ಆ) ಕೆರೆಗಳಿಗೆ ನೀರುಣಿಸುವ ಯೋಜನೆಯ ರೂಪುರೇಷೆಗಳೇನು ಹಾಗೂ ಯೋಜನೆಗೆ ಸರ್ಕಾರದಿಂದ ಎಷ್ಟು ಹಣವನ್ನು ಮೀಸಲಿಡಲಾಗಿದೆ ;

(ಇ) ಕೆರೆಗಳಿಗೆ ನೀರುಣಿಸುವ ಯೋಜನೆಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ದೇವಸ್ಥಾನಗಳಿಗೆ ಮೂಲಭೂತ ಸೌಕರ್ಯ ಒದಗಿಸಿರುವ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೨೩೧ (೨೨೬೭) ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿನ ಕುಕ್ಕೆ ಸುಬ್ರಮಣ್ಯ, ಕೊಲ್ಲೂರು ಮೂಕಾಂಬಿಕೆ, ಹಣಗೆರೆಕಟ್ಟೆ ಮತ್ತು ಸಾಗರದ ಗಣಪತಿ ದೇವಸ್ಥಾನಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಂಗ್ರಹವಾದ ಹಣವೆಷ್ಟು ; (ವರ್ಷಾವಾರು ವಿವರ ನೀಡುವುದು)

(ಆ) ಸಂಗ್ರಹವಾದ ಹಣವನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗಿದೆ ; (ವರ್ಷಾವಾರು ದೇವಸ್ಥಾನವಾರು ಮಾಹಿತಿ ನೀಡುವುದು)

(ಇ) ಯಾವ ಯಾವ ಮೂಲಭೂತ ಸೌಕರ್ಯವನ್ನು ಈ ದೇವಸ್ಥಾನಗಳಿಗೆ ಕಲ್ಪಿಸಲಾಗಿದೆ ; (ವರ್ಷಾವಾರು, ದೇವಸ್ಥಾನವಾರು ಮಾಹಿತಿ ನೀಡುವುದು)

(ಈ) ಉಳಿಕೆ ಇರುವ ಹಣವನ್ನು ಯಾವ ಬ್ಯಾಂಕಿನಲ್ಲಿ ಇಡಲಾಗಿದೆ ಎಷ್ಟು ಹಣ ಇಡಲಾಗಿದೆ ? (ವರ್ಷಾವಾರು ದೇವಸ್ಥಾನವಾರು ವಿವರ ನೀಡುವುದು)

## ಕೃಷ್ಣಾ ಮೇಲ್ದಂಡೆ ಯೋಜನೆ ೩ನೇ ಹಂತದ ಕಾಮಗಾರಿಗಳ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೨೩೨ (೨೨೫೩) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೇ ಹಂತದ ಕಾಮಗಾರಿಯ ಭೂಸ್ವಾಧೀನಕ್ಕೆ ಎಷ್ಟು ಹಣವನ್ನು ಕಾಯ್ದಿರಿಸಲಾಗಿದೆ ; ಮೂರನೇ ಹಂತಕ್ಕೆ ಎಷ್ಟು ಭೂಮಿಯ ಅವಶ್ಯಕತೆ ಇರುತ್ತದೆ ಮತ್ತು ಇಲ್ಲಿಯವರೆಗೆ ಎಷ್ಟು ಭೂಮಿಯನ್ನು ಮೂರನೇ ಹಂತಕ್ಕೆ ಸ್ವಾಧೀನಪಡಿಸಿಕೊಳ್ಳಲಾಗಿದೆ ;

(ಆ) ಕೃಷ್ಣಾ ಭಾಗ್ಯ ಜಲ ನಿಗಮದ ವ್ಯಾಪ್ತಿಗೆ ಎಷ್ಟು ಏತ ನೀರಾವರಿ ಯೋಜನೆಗಳು ಬರುತ್ತವೆ ; ಇವುಗಳಲ್ಲಿ ಕೊಪ್ಪಳ ಏತ ನೀರಾವರಿ ಯೋಜನೆಗೆ ಇಲ್ಲಿಯವರೆಗೆ ಎಷ್ಟು ಹಣ ಮಂಜೂರಾಗಿರುತ್ತದೆ ;

(ಇ) ಕೊಪ್ಪಳ ಏತ ನೀರಾವರಿ ಯೋಜನೆಯಲ್ಲಿ ತುಂಡು ಗುತ್ತಿಗೆ ಕಾಮಗಾರಿಗಳನ್ನು ನೀಡಲಾಗಿದೆಯೇ ; ನೀಡಿದ್ದಲ್ಲಿ, ಎಷ್ಟು ಮೊತ್ತದ ಕಾಮಗಾರಿ ನೀಡಲಾಗಿರುತ್ತದೆ;

(ಈ) ಕಳೆದ ಮೂರು ವರ್ಷಗಳಲ್ಲಿ ಕೃಷ್ಣಾ ಭಾಗ್ಯ ಜಲ ನಿಗಮದ ವತಿಯಿಂದ ನೀಡಿರುವ ಒಟ್ಟಾರೆ ಗುತ್ತಿಗೆ ಕಾಮಗಾರಿಗಳಲ್ಲಿ ಎಷ್ಟು ಕಾಮಗಾರಿಗಳನ್ನು ನಿಗಧಿತ ಸಮಯದಲ್ಲಿ ಪೂರ್ಣಗೊಳಿಸಲಾಗಿದೆ ; ಸಮಯ ಮೀರಿ ಬಾಕಿ ಇರುವ ಕಾಮಗಾರಿಗಳೆಷ್ಟು ;

(ಉ) ಕೃಷ್ಣಾ ಭಾಗ್ಯ ಜಲ ನಿಗಮದ ಅಡಿಯಲ್ಲಿ ಗುತ್ತಿಗೆ ಕಾಮಗಾರಿ ಪಡೆದು, ಅವಧಿ ಮೀರಿದ ಪ್ರಕರಣಗಳಲ್ಲಿ ಎಷ್ಟು ಗುತ್ತಿಗೆದಾರರಿಗೆ ಹಣ ಪಾವತಿ ಮಾಡಲಾಗಿದೆ ; ಇದರಿಂದ ನಿಗಮಕ್ಕೆ ಆಗಿರುವ ನಷ್ಟ ಎಷ್ಟು ?

## ಹೈದ್ರಾಬಾದ್–ಕರ್ನಾಟಕ ಭಾಗದ ಅಭ್ಯರ್ಥಿಗಳಿಗೆ "ಅರ್ಹತಾ ಪ್ರಮಾಣ ಪತ್ರ"ದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೨೩೩ (೨೨೮೯) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಂವಿಧಾನದ ಕಲಂ ೩೭೧ (ಜೆ) ಅನ್ವಯ ಹೈದ್ರಾಬಾದ್ –ಕರ್ನಾಟಕ ಭಾಗದ ಅಭ್ಯರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರಗಳನ್ನು ಪಡೆದುಕೊಳ್ಳಲು ಸಲ್ಲಿಸಬೇಕಾದ ದಾಖಲೆಗಳು ಯಾವುವು ; (ಮಾಹಿತಿ ನೀಡುವುದು)

(ಆ) ಅಭ್ಯರ್ಥಿಯ ಜನನ ಹಾಗೂ ವಿದ್ಯಾಭ್ಯಾಸ ಹೈದ್ರಾಬಾದ್-ಕರ್ನಾಟಕ ಭಾಗದಲ್ಲಿ ಆಗದೇ ಅವರ ತಂದೆ ಮೂಲತಃ ಹೈ.ಕ. ಭಾಗದವರಿದ್ದು, ಚರ ಮತ್ತು ಸ್ಥಿರ ಆಸ್ತಿ ಹೊಂದಿದ್ದರೆ ಅರ್ಹತಾ ಪ್ರಮಾಣ ಪತ್ರ ನೀಡಬಹುದೇ ; (ಮಾಹಿತಿ ನೀಡುವುದು)

(ಇ) ಮೂಲತಃ ಹೈದ್ರಾಬಾದ್-ಕರ್ನಾಟಕ ಭಾಗದವರಾಗಿದ್ದು, ಸ್ವಾತಂತ್ರ ಹೋರಾಟಗಾರರ ಕುಟುಂಬದವರೊಬ್ಬರ ಮಕ್ಕಳ ಅರ್ಹತಾ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದರೆ ಅರ್ಹತಾ ಪ್ರಮಾಣ ಪತ್ರ ನೀಡದೆ ತಿರಸ್ಕರಿಸಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಿರಸ್ಕರಿಸಲು ಕಾರಣವೇನು; ಈ ನಿಟ್ಟಿನಲ್ಲಿ ಕೈಗೊಳ್ಳುವ ಕ್ರಮವೇನು ; (ಮಾಹಿತಿ ನೀಡುವುದು)

(ಈ) ಜನನ ಹಾಗೂ ವಿದ್ಯಾಭ್ಯಾಸ ಹೊರತುಪಡಿಸಿ ಹೈದ್ರಾಬಾದ್-ಕರ್ನಾಟಕ ಭಾಗದವರಿಗೆ ಅರ್ಹತಾ ಪ್ರಮಾಣ ಪತ್ರ ಪಡೆಯಲು ಇರುವ ಮಾರ್ಗಗಳು ಯಾವುವು ; (ಆದೇಶಗಳೊಂದಿಗೆ ಮಾಹಿತಿ ನೀಡುವುದು)

(ಉ) ಹೈದ್ರಾಬಾದ್-ಕರ್ನಾಟಕ ಭಾಗದವರಿಗೆ ಅರ್ಹತಾ ಪ್ರಮಾಣ ಪತ್ರ ನೀಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವುದರಿಂದ ನಿಗದಿತ ಸಮಯಕ್ಕೆ ಅಭ್ಯರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರ ದೊರೆಯದೆ ಅವಕಾಶಗಳಿಂದ ವಂಚಿತರಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಕೆರೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೩೪ (೨೧೫೮) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಕೆರೆಗಳ ಜೀರ್ಣೋದ್ಧಾರಕ್ಕಾಗಿ ಸರ್ಕಾರ ಬಿಡುಗಡೆ ಮಾಡಿರುವ ಹಣ ಎಷ್ಟು ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಯಾವ ಯಾವ ಕೆರೆಗಳ ಅಭಿವೃದ್ಧಿ ಮಾಡಲಾಗಿದೆ ; ಅದಕ್ಕೆ ಎಷ್ಟು ಹಣ ಖರ್ಚು ಮಾಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಮೇಲ್ಕಂಡ ಜಿಲ್ಲೆಗಳಲ್ಲಿ ಎಷ್ಟು ಕೆರೆಗಳ ಅಭಿವೃದ್ಧಿ ಕಾಮಗಾರಿಗಳು ಮುಗಿದಿವೆ; ಇನ್ನು ಎಷ್ಟು ಬಾಕಿ ಇವೆ ; ಯಾವ ಕಾಲಮಿತಿಯೊಳಗೆ ಈ ಕಾಮಗಾರಿಗಳನ್ನು ಮುಕ್ತಾಯಗೊಳಿಸಲಾಗುವುದು ; ಇದಕ್ಕಾಗಿ ಮೀಸಲಿಟ್ಟಿರುವ ಹಣ ಎಷ್ಟು ?

## ಕೊಡಗು ಜಿಲ್ಲೆಯಲ್ಲಿರುವ ಹಾಕಿ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೨೩೫ (೨೯೫) ಯುವಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯಲ್ಲಿರುವ ಹಾಕಿ ಪ್ರತಿಭೆಗಳನ್ನು ಗುರುತಿಸಿ, ಪ್ರೋತ್ಸಾಹಿಸಿ, ತರಬೇತಿಗೊಳಿಸಿ ಅವರನ್ನು ಅಂತರರಾಷ್ಟ್ರೀಯ ಮಟ್ಟದಲ್ಲಿ ಪಾಲ್ಗೊಳ್ಳುವಂತೆ ಮಾಡಲು ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳೇನು ; (ಕಳೆದ ೧೦ ವರ್ಷಗಳ ಯೋಜನೆ, ರೂಪುರೇಷೆ ಮತ್ತು ಅನುಷ್ಠಾನದ ಸಂಪೂರ್ಣ ವಿವರ ನೀಡುವುದು)

(ಆ) ಜಿಲ್ಲೆಯಲ್ಲಿರುವ ವಿಶೇಷ ಹಾಕಿ ಪ್ರತಿಭೆಗಳಿಗಾಗಿ ಅಭ್ಯಾಸಕ್ಕಾಗಿ ಅಂತರರಾಷ್ಟ್ರೀಯ ಅಥವಾ ಉನ್ನತ ದರ್ಜೆಯ ಮೈದಾನ ನಿರ್ಮಾಣ, ತಜ್ಞ ತರಬೇತುದಾರರ ನೇಮಕ ಹಾಗೂ ವಸತಿ ಮತ್ತು ಇತರೆ ಸೌಲಭ್ಯಗಳನ್ನು ಕಲ್ಪಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಇ) ಹಾಕಿ ಕ್ರೀಡೆಗೆ ಸಂಬಂಧಿಸಿದಂತೆ ಕೊಡಗು ಜಿಲ್ಲೆಗೆ ವಿಶೇಷ ಪ್ರಾಧಾನ್ಯತೆ ಹಾಗೂ ಈ ಕ್ರೀಡಾಪಟುಗಳಿಗೆ ಎಲ್ಲಾ ರೀತಿಯ ಅವಶ್ಯಕತೆಗಳನ್ನೊಳಗೊಂಡ ಕ್ರೀಡಾ ವ್ಯವಸ್ಥೆ ರೂಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಈ) ಇದ್ದಲ್ಲಿ, ಈ ಎಲ್ಲಾ ಸೌಕರ್ಯಗಳನ್ನು ಯಾವ ಕಾಲಮಿತಿಯೊಳಗೆ ಕಲ್ಪಿಸಲಾಗುವುದು ? (ವಿವರ ನೀಡುವುದು)

## ಹಾವೇರಿ ಜಿಲ್ಲೆಯ ಹಿರೇಕೆರೂರು ತಾಲ್ಲೂಕಿನ ಕ್ರೀಡಾಂಗಣ ಮತ್ತು ಅಲ್ಲಿ ಕೈಗೊಂಡಿರುವ ಒಳ ಕ್ರೀಡಾಂಗಣ ಕಾಮಗಾರಿ ಕುರಿತು

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೨೩೬ (೨೨೧೮) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾವೇರಿ ಜಿಲ್ಲೆಯ ಹಿರೇಕೆರೂರ ಪಟ್ಟಣದ ಕ್ರೀಡಾಂಗಣದಲ್ಲಿ ಜಾಲಿಗಿಡ, ಕಾಂಗ್ರೆಸ್‌ಕಸ ಹಾಗೂ ವಿವಿಧ ಗಿಡಗಂಟೆಗಳು ಬೆಳೆದು ಇಲ್ಲಿ ಕಿಡಿಗೇಡಿಗಳು ದಿನನಿತ್ಯ ರಾಜಾರೋಷವಾಗಿ ಜೂಜಾಟ ಮತ್ತು ಅನೈತಿಕ ಚಟುವಟಿಕೆಗಳನ್ನು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕ್ರೀಡಾಂಗಣದ ನಿರ್ವಹಣೆಗಾಗಿ ಯಾವ ಅಧಿಕಾರಿಯನ್ನು ನೇಮಿಸಲಾಗಿದೆ; ಕ್ರೀಡಾ ತರಬೇತಿದಾರರು ಮತ್ತು ಕಾವಲುಗಾರರನ್ನು ನೇಮಿಸಲಾಗಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ;

(ಇ) ಈ ತಾಲ್ಲೂಕಾ ಕ್ರೀಡಾಂಗಣದಲ್ಲಿ ಒಳ ಕ್ರೀಡಾಂಗಣ ನಿರ್ಮಿಸಲು ಸರ್ಕಾರ ಯಾವ ವರ್ಷ ನಿರ್ಣಯ ಕೈಗೊಂಡಿದೆ ಮತ್ತು ಯಾವ ವರ್ಷದಿಂದ ಕಾಮಗಾರಿ ಪ್ರಾರಂಭ ಮಾಡಿದೆ ; ಇದಕ್ಕೆ ನಿಗದಿಮಾಡಿದ ಹಾಗೂ ಬಿಡುಗಡೆ ಮಾಡಿದ ಅನುದಾನ ಎಷ್ಟು ;

(ಈ) ಒಳ ಕ್ರೀಡಾಂಗಣ ನಿರ್ಮಾಣದ ಕಾಮಗಾರಿ ಅನುದಾನದ ಕೊರತೆಯಿಂದ ಮಂದಗತಿಯಲ್ಲಿ ಸಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಉಳಿದ ಅನುದಾನವನ್ನು ಯಾವಾಗ ಬಿಡುಗಡೆ ಮಾಡಿ ಈ ಒಳಕ್ರೀಡಾಂಗಣದ ಉದ್ಘಾಟನೆಯನ್ನು ಮಾಡಲಾಗುವುದು ?

## ಆನೆ ಕಾರಿಡಾರ್ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೨೩೭ (೨೨೮೩) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಕಲೇಶಪುರ ತಾಲ್ಲೂಕು ಪಶ್ಚಿಮ ಘಟ್ಟದ ಅಂಚಿನಲ್ಲಿರುವ ಬಿಸಲೆ ರಕ್ಷಿತಾರಣ್ಯ ಮತ್ತು ಕಾಗಿನೆರೆ ಅರಣ್ಯ ಪಕ್ಕದ ಆನೆ ಕಾರಿಡಾರ್ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳ ಸಂಖ್ಯೆ ಎಷ್ಟು ;

(ಆ) ಸದರಿ ಗ್ರಾಮಗಳ ರೈತರು ಆನೆಗಳ ಹಾವಳಿಯಿಂದ ತೀವ್ರ ತೊಂದರೆಗೊಳಗಾಗಿ ತಮ್ಮ ಬದುಕು ಸಾಧ್ಯವಿಲ್ಲವೆಂದು ಮುಖ್ಯಮಂತ್ರಿಗಳ ಗಮನಕ್ಕೆ ತಂದಿರುವುದು ನಿಜವೇ ;

(ಇ) ಹಾಗಿದ್ದರೆ, ಈ ಸಂಬಂಧ ಕೈಗೊಂಡ ಕ್ರಮಗಳೇನು : (ವಿವರವಾದ ಮಾಹಿತಿ ನೀಡುವುದು)

(ಈ) ಈ ವಿಷಯಕ್ಕೆ ಸಂಬಂಧಪಟ್ಟಂತೆ ತಾತ್ಕಾಲಿಕ ಪರಿಹಾರ ಅಲ್ಲದೆ, ಶಾಶ್ವತ ಪರಿಹಾರದ ಬಗ್ಗೆ ಸರ್ಕಾರದ ನಿಲುವೇನು ;

(ಉ) ರಕ್ಷಿತಾರಣ್ಯಗಳ ಪಕ್ಕದಲ್ಲಿರುವ ರೈತರ ಜಮೀನುಗಳನ್ನು ವಶಪಡಿಸಿಕೊಳ್ಳಲು ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ನಿರ್ದೇಶನವೇನು : ಇದಕ್ಕೆ ಸರ್ಕಾರದ ನಿಲುವೇನು ;

(ಊ) ಈ ಸಮಸ್ಯೆಗೆ ಯಾವ ಕಾಲಮಿತಿಯೊಳಗೆ ಪರಿಹಾರ ನೀಡಲಾಗುವುದು ?

## ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಕೆರೆ–ಕುಂಟೆಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೨೩೮ (೨೧೭೧) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖಾ ವ್ಯಾಪ್ತಿಗೆ ಸೇರಿದ ಒಟ್ಟು ಕೆರೆ–ಕುಂಟೆಗಳ ಸಂಖ್ಯೆ ಎಷ್ಟು ;

(ಆ) ಗ್ರಾಮ ಪಂಚಾಯಿತಿ ವ್ಯಾಪ್ತಿಯ ಯಾವ ಯಾವ ಊರುಗಳಲ್ಲಿ ಕೆರೆ–ಕುಂಟೆಗಳಿವೆ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಇ) ಕೆರೆ–ಕುಂಟೆಗಳ ರಕ್ಷಣೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಕಳೆದ ೩ ವರ್ಷಗಳಲ್ಲಿ ಮಳೆ ನೀರಿನಿಂದ ಭರ್ತಿಯಾದ ಕೆರೆಗಳು ಯಾವುವು; (ವಿವರ ನೀಡುವುದು)

(ಉ) ಕೃಷಿ ಬಳಕೆಗಾಗಿ ಯಾವ ಯಾವ ಕೆರೆ–ಕುಂಟೆಗಳ ನೀರನ್ನು ಉಪಯೋಗಿಸಲಾಗುತ್ತಿದೆ ? (ವಿವರ ನೀಡುವುದು)

## ೨೦೧೪–೧೭ನೇ ಸಾಲಿನಲ್ಲಿ ಅಂತರ್ಜಲ ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಎಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೩೯ (೨೧೯೯) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೪–೧೫, ೨೦೧೫–೧೬, ೨೦೧೬–೧೭ನೇ ಸಾಲಿನಲ್ಲಿ ಅಂತರ್ಜಲ ಅಭಿವೃದ್ಧಿ ಪಡಿಸಲು ಎಷ್ಟು ಹಣ ಖರ್ಚು ಮಾಡಲಾಗಿದೆ ;

(ಆ) ಎಷ್ಟು ಚೆಕ್ ಡ್ಯಾಂ/ಬ್ಯಾರೇಜ್‌ಗಳನ್ನು ಸ್ಥಾಪಿಸಲಾಗಿದೆ ;

(ಇ) ಎಲ್ಲೆಲ್ಲಿ ಸ್ಥಾಪಿಸಲಾಗಿದೆ, ಇದಕ್ಕೆ ವೆಚ್ಚವಾಗಿರುವ ಹಣವೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಬಾಲ ಕಾರ್ಮಿಕ ಪದ್ಧತಿ ಕುರಿತು

**ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೨೪೦ (೨೨೪೬) ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಾಲಕಾರ್ಮಿಕ ಪದ್ಧತಿ (ನಿಷೇಧ ಮತ್ತು ನಿಯಂತ್ರಣ) ಕಾಯಿದೆ ೧೯೮೬ಕ್ಕೆ ೨೦೧೫ರಲ್ಲಿ ಆಗಿರುವ ತಿದ್ದುಪಡಿಯನ್ನು ರಾಜ್ಯದಲ್ಲಿ ಸಮರ್ಪಕವಾಗಿ ಜಾರಿ ಮಾಡುವ ದಿಶೆಯಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ;

(ಆ) ಹೊಸ ಕಾಯಿದೆಯಂತೆ ಇಲ್ಲಿಯವರೆಗೂ ರಾಜ್ಯದಲ್ಲಿ ಎಷ್ಟು ಬಾಲ ಕಾರ್ಮಿಕರನ್ನು ಮತ್ತು ಎಷ್ಟು ಹದಿವಯಸ್ಸಿನ ಕಾರ್ಮಿಕರನ್ನು ಅಪಾಯಕಾರಿ ಉದ್ದಿಮೆಗಳಿಂದ ಬಿಡಿಸಲಾಗಿದೆ ; ಎಷ್ಟು ಪ್ರಕರಣಗಳಲ್ಲಿ ಕೇಸು ದಾಖಲಿಸಲಾಗಿದೆ ; ಆ ಪೈಕಿ ಎಷ್ಟು ಪ್ರಕರಣಗಳಲ್ಲಿ ಮಾಲೀಕರಿಗೆ ಶಿಕ್ಷೆಯಾಗಿದೆ ; (೨೦೧೫ರಿಂದ ೨೦೧೭ರವರೆಗಿನ ಪ್ರಕರಣವಾರು ವಿವರಗಳನ್ನು ನೀಡುವುದು)

(ಇ) ಬಾಲ ಕಾರ್ಮಿಕ ಪದ್ಧತಿಗೆ ಆಗಿರುವ ತಿದ್ದುಪಡಿ ಕುರಿತು ಅದರಲ್ಲೂ ೧೮ ವರ್ಷದವರೆಗಿನ ಮಕ್ಕಳನ್ನು ಯಾವುದೇ ಅಪಾಯಕಾರಿ ಉದ್ದಿಮೆಗಳಲ್ಲಿ ತೊಡಗಿಸಿಕೊಳ್ಳಬಾರದು ಎನ್ನುವ ಕುರಿತು ಸರ್ಕಾರ ಎಂತಹ ಪ್ರಚಾರ ಕಾರ್ಯವನ್ನು ಕೈಗೊಂಡಿದೆ ? (ವಿವರ ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು. ಪಿ7, ಕಾ.ಸೂ. 172, ಪ್ರತಿಗಳು 1500